**Akashvani : Bangalore**
**National Bulletin In Kannada**
**13.12.2024 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

**೧. ಭಾರತದ ಸಂವಿಧಾನ ಅಂಗೀಕಾರವಾಗಿ ೭೫ ವರ್ಷಗಳು ಪೂರ್ಣಗೊಂಡ ಹಿನ್ನೆಲೆಯಲ್ಲಿ ಲೋಕಸಭೆಯಲ್ಲಿ ವಿಶೇಷ ಅಧಿವೇಶನ**

**೨. ಪ್ರಯಾಗ್‌ರಾಜ್‌ನಲ್ಲಿ ೬ ಸಾವಿರದ ೬೭೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ**

**೩. ದೇಶದ ವಿಮಾನ ನಿಲ್ದಾಣಗಳಲ್ಲಿ ಶೀಘ್ರ ಉಡಾನ್ ಯಾತ್ರಿ ಕೆಫೆ ಆರಂಭ**

**೪. 'ಪ್ರಧಾನಮಂತ್ರಿ ಮಾತೃ ವಂದನಾ' ಯೋಜನೆಯಡಿ ೩.೬೪ ಕೋಟಿ ಫಲಾನುಭವಿಗಳಿಗೆ ಧನಸಹಾಯ ವಿತರಣೆ**

**<><*<><>*><>**

ಭಾರತದ ಸಂವಿಧಾನದ ೭೫ ವರ್ಷಗಳ ವೈಭವದ ಪಯಣದ ಕುರಿತು ಲೋಕಸಭೆಯಲ್ಲಿ ಎರಡು ದಿನಗಳ ವಿಶೇಷ ಚರ್ಚೆ ಇಂದು ಆರಂಭವಾಯಿತು. ಲೋಕಸಭೆಯಲ್ಲಿಂದು ಚರ್ಚೆಯನ್ನು ಆರಂಭಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಭಾರತೀಯ ಸಂವಿಧಾನವು ಸಾಮಾಜಿಕ, ಆರ್ಥಿಕ, ರಾಜಕೀಯ ಮತ್ತು ಸಾಂಸ್ಕೃತಿಕ ಜೀವನದ ಎಲ್ಲಾ ಅಂಶಗಳನ್ನು ಒಳಗೊಳ್ಳುವ ಮೂಲಕ ರಾಷ್ಟ್ರ ನಿರ್ಮಾಣಕ್ಕೆ ದಾರಿ ಮಾಡಿಕೊಡುತ್ತದೆ. ಸಂವಿಧಾನವು ದೇಶದ ನಾಗರಿಕ ಮೌಲ್ಯಗಳ ಅಭಿವ್ಯಕ್ತಿಯಾಗಿದೆ ಎಂದು ಹೇಳಿದರು. ಸುಮಾರು ಮೂರು ವರ್ಷಗಳ ಚರ್ಚೆಯ ನಂತರ, ದೇಶವು ಸಂವಿಧಾನವನ್ನು ಪಡೆದುಕೊಂಡಿತು. ಸಂವಿಧಾನ ಸಭೆಯು ರಚಿಸಿದ ಸಂವಿಧಾನವು ಕೇವಲ ಅಧಿಕೃತ ದಾಖಲೆಯಾಗಿದೆ. ಅದು ಜನರ ಇಚ್ಛೆಯ ಅಭಿವ್ಯಕ್ತಿಯಾಗಿದೆ ಎಂದು ಅವರು ಹೇಳಿದರು. ಕಳೆದ ಕೆಲವು ವರ್ಷಗಳಲ್ಲಿ ಸಂವಿಧಾನವನ್ನು ನಿರ್ದಿಷ್ಟ ಪಕ್ಷದ ಕೊಡುಗೆ ಎಂದು ಬಿಂಬಿಸುವ ಪ್ರಯತ್ನಗಳನ್ನು ಮಾಡಲಾಗಿದೆ. ಸಂವಿಧಾನವು ಯಾವುದೇ ಒಂದು ಪಕ್ಷದ ಕೊಡುಗೆಯಲ್ಲ. ಬದಲಾಗಿ ಭಾರತದ ಮೌಲ್ಯಗಳೊಂದಿಗೆ ಜೋಡಿಸಲಾದ ಅಪ್ರತಿಮ, ಪರಿವರ್ತಕ ದಾಖಲೆಯಾಗಿದೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದರು. ಮದನ್ ಮೋಹನ್ ಮಾಳವೀಯ, ಲಾಲಾ ಲಜಪತ್ ರಾಯ್, ಭಗತ್ ಸಿಂಗ್, ವೀರ್ ಸಾವರ್ಕರ್ ಅವರಂತಹ ನಾಯಕರ ಚಿಂತನೆಗಳು ಸಂವಿಧಾನವನ್ನು ಬಲಪಡಿಸಿವೆ ಎಂದರು. ಚರ್ಚೆಯಲ್ಲಿ ಭಾಗವಹಿಸಿದ ಕಾಂಗ್ರೆಸ್‌ನ ಪ್ರಿಯಾಂಕಾ ಗಾಂಧಿ ವಾದ್ರಾ ಮಾತನಾಡಿ, ಸಂವಿಧಾನವು ನಾಗರಿಕರನ್ನು ಸುರಕ್ಷಿತವಾಗಿಡಲು ಸುರಕ್ಷತಾ ರಕ್ಷಾ ಕವಚವಾಗಿದೆ. ಇದು ನ್ಯಾಯ, ಏಕತೆ ಮತ್ತು ವ್ಯಕ್ತಪಡಿಸುವ ಹಕ್ಕುಗಳ ರಕ್ಷಾ ಕವಚವಾಗಿದೆ ಎಂದು ಹೇಳಿದರು.

**<><*<><>*><>**

೨೦೦೧ ರಲ್ಲಿ, ಸಂಸತ್ತಿನ ಮೇಲೆ ನಡೆದ ಭಯೋತ್ಪಾದಕ ದಾಳಿಯ ಸಂದರ್ಭದಲ್ಲಿ ಅದರ ರಕ್ಷಣೆಗಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ವೀರರಿಗೆ, ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಶ್ರದ್ಧಾಂಜಲಿ ಸಲ್ಲಿಸಿದರು. ರಾಷ್ಟ್ರಪತಿಗಳು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಭದ್ರತಾ ಸಿಬ್ಬಂದಿಯ ಧೈರ್ಯ ಮತ್ತು ನಿಸ್ವಾರ್ಥ ಸೇವೆಯನ್ನು ಸ್ಮರಿಸಿ, ದೇಶಕ್ಕೆ ಅವರು ನೀಡಿದ ಕೊಡುಗೆಯು ಸ್ಫೂರ್ತಿದಾಯಕವಾಗಿದೆ ಎಂದು ಹೇಳಿದ್ದಾರೆ. ರಾಷ್ಟ್ರವು ಭದ್ರತಾ ಸಿಬ್ಬಂದಿ ಮತ್ತು ಅವರ ಕುಟುಂಬಗಳೆಡೆಗೆ ಕೃತಜ್ಞತೆಯನ್ನು ಹೊಂದಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು. ಭಯೋತ್ಪಾದನೆಯನ್ನು ಎದುರಿಸಲು ಭಾರತದ ಅಚಲ ಸಂಕಲ್ಪವನ್ನು ರಾಷ್ಟ್ರಪತಿಗಳು ಪುನರುಚ್ಚರಿಸಿದರು. ಹುತಾತ್ಮರ ತ್ಯಾಗವು ದೇಶಕ್ಕೆ ಶಾಶ್ವತವಾಗಿ ಸ್ಫೂರ್ತಿ ನೀಡುತ್ತದೆ. ಅವರ ಧೈರ್ಯ ಮತ್ತು ಸಮರ್ಪಣೆಗೆ ದೇಶ ಚಿರಋಣಿಯಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಸಂಸತ್ತಿನ ಉಭಯ ಸದನಗಳಲ್ಲಿ ಭಯೋತ್ಪಾದಕ ದಾಳಿಯಲ್ಲಿ ಹುತಾತ್ಮರಾದವರಿಗೆ ಗೌರವ ನಮನ ಸಲ್ಲಿಸಲಾಯಿತು. ಭದ್ರತಾ ಸಿಬ್ಬಂದಿಗೆ ಗೌರವ ಸೂಚಕವಾಗಿ ಉಭಯ ಸದನಗಳ ಸದಸ್ಯರು ಮೌನಾಚರಣೆ ಮಾಡಿದರು.

**<><*<><>*><>**

೨೦೨೫ರ ಮಹಾಕುಂಭ  ಮೇಳವು ದೇಶವನ್ನು ಮುನ್ನಡೆಸುವ ಏಕತೆ ಮತ್ತು ಸಮಾನತೆಯ ಮಹಾಯಜ್ಞವಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.  ಮುಂದಿನ ವರ್ಷ ಜನವರಿ ೧೩ ರಿಂದ ಫೆಬ್ರವರಿ ೨೬ ರವರೆಗೆ ನಡೆಯಲಿರುವ ಮಹಾಕುಂಭ-೨೦೨೫ ಅನ್ನು ಔಪಚಾರಿಕವಾಗಿ ಉದ್ಘಾಟಿಸಿದ ನಂತರ ಪ್ರಯಾಗ್‌ರಾಜ್‌ನ ಸಂಗಮ್ ಪ್ರದೇಶದಲ್ಲಿ ಸಾರ್ವಜನಿಕ ಸಭೆ ಉದ್ದೇಶಿಸಿ ಅವರು ಮಾತನಾಡಿದರು.

ಇದಕ್ಕೂ ಮುನ್ನ ಸುಮಾರು ೬ ಸಾವಿರದ ೬೭೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಅವರು ಚಾಲನೆ ನೀಡಿದರು. ಇದರಲ್ಲಿ ಮೂಲಸೌಕರ್ಯ ಅಭಿವೃದ್ಧಿ ಮತ್ತು ಪ್ರಯಾಗ್‌ರಾಜ್‌ಗೆ ತಡೆರಹಿತ ಸಂಪರ್ಕವನ್ನು ಒದಗಿಸಲು ವಿವಿಧ ರೈಲು ಮತ್ತು ರಸ್ತೆ ಯೋಜನೆಗಳು ಸೇರಿವೆ. ಅಲ್ಲದೇ ಭಾರದ್ವಾಜ್ ಆಶ್ರಮ ಕಾರಿಡಾರ್, ಶೃಂಗವೇರಪುರ ಧಾಮ್ ಕಾರಿಡಾರ್, ಅಕ್ಷಯವಟ್ ಕಾರಿಡಾರ್, ಹನುಮಾನ್ ಮಂದಿರ ಕಾರಿಡಾರ್ ಸೇರಿದಂತೆ ಪ್ರಮುಖ ದೇವಾಲಯ ಕಾರಿಡಾರ್‌ಗಳನ್ನು ಪ್ರಧಾನಿ ಮೋದಿ ಉದ್ಘಾಟಿಸಿದರು.  ಸ್ವಚ್ಛ ಮತ್ತು ನಿರ್ಮಲ್ ಗಂಗಾದೆಡೆಗಿನ ಕೇಂದ್ರ ಸರ್ಕಾರದ ಬದ್ಧತೆಗೆ ಅನುಗುಣವಾಗಿ, ಗಂಗಾ ನದಿಗೆ ಹರಿಯುವ ಸಣ್ಣ ಚರಂಡಿಗಳ ತಡೆ, ಟ್ಯಾಪಿಂಗ್, ತಿರುವು ಮತ್ತು ಸಂಸ್ಕರಣೆಯ ಯೋಜನೆಗಳನ್ನು ಪ್ರಧಾನಿ ಉದ್ಘಾಟಿಸಿದರು. ಇದು ಸಂಸ್ಕರಿಸದ ನೀರನ್ನು ನದಿಗೆ ಬಿಡುವುದನ್ನು ತಡೆಯುತ್ತದೆ. ಮಹಾಕುಂಭ ಮೇಳ ೨೦೨೫ರ ಕುರಿತು ಭಕ್ತರಿಗೆ ಮಾರ್ಗದರ್ಶನ ಮತ್ತು ಮಾಹಿತಿಯನ್ನು ಒದಗಿಸುವ ಕುಂಭ್ ಸಹಾಯ್ ಚಾಟ್‌ಬಾಟ್‌ಗೆ ಪ್ರಧಾನಿ ಚಾಲನೆ ನೀಡಿದರು. ಅಲ್ಲದೇ, ಮೇಳದ ಆವರಣವನ್ನು ಸ್ವಚ್ಛವಾಗಿಡಲು ತೊಡಗಿರುವ ಜನರಿಗೆ ಸುಧಾರಿತ ಟ್ಯಾಂಕ್‌ಗಳನ್ನು ಪ್ರಧಾನಿ ವಿತರಿಸಿದರು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಮಧ್ಯಾಹ್ನ ಪ್ರಯಾಗ್‌ರಾಜ್‌ಗೆ ಆಗಮಿಸಿ, ಸಂಗಮ ನೋಸ್, ಅಕ್ಷಯವಟ ವೃಕ್ಷ, ಹನುಮಾನ್ ಮಂದಿರ ಮತ್ತು ಸರಸ್ವತಿ ಕೂಪ್‌ನಲ್ಲಿ ಪೂಜೆ ಮತ್ತು ದರ್ಶನ ಪಡೆದರು. ಸಂಗಮ್ ಪ್ರದೇಶದಲ್ಲಿ ಕ್ರೂಸ್ ಪ್ರಯಾಣದ ಮೂಲಕ ಮಹಾಕುಂಭ ಮೇಳ ೨೦೨೫ರ ಸಿದ್ಧತೆಗಳನ್ನು ಪರಿಶೀಲಿಸಿದರು.

**<><*<><>*><>**

ವಿಮಾನ ನಿಲ್ದಾಣಗಳಲ್ಲಿ ಉಡಾನ್ ಯೋಜನೆಯ ಮೂಲಕ ಪ್ರಯಾಣಿಸುವ ಪ್ರಯಾಣಿಕರಿಗಾಗಿ ಕೇಂದ್ರ ಸರ್ಕಾರ ಶೀಘ್ರದಲ್ಲಿ ಉಡಾನ್ ಯಾತ್ರಿ ಕೆಫೆ ಪ್ರಾರಂಭಿಸಲಿದೆ ಎಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕೆ.ಆರ್.ರಾಮಮೋಹನ್ ನಾಯ್ಡು ತಿಳಿಸಿದ್ದಾರೆ. ಕೋಲ್ಕಾತ್ತಾದ ನೇತಾಜಿ ಸುಭಾಷ್ ಚಂದ್ರಬೋಸ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ನೂರು ವರ್ಷಗಳ ಪೂರ್ಣಗೊಂಡಿರುವ ಕುರಿತು ಅಧಿಕೃತ ಲಾಂಛನವನ್ನು ಅನಾವರಣಗೊಳಿಸಿದ ಸಚಿವರು, ಕೆಫೆಯು ವಿಮಾನ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಕೈಗೆಟಕುವ ದರದಲ್ಲಿ ಆಹಾರವನ್ನು ಒದಗಿಸುತ್ತದೆ ಎಂದು ಹೇಳಿದರು. ಮೊದಲು ಕೋಲ್ಕತ್ತದ ವಿಮಾನ ನಿಲ್ದಾಣದಲ್ಲಿ ಪ್ರಾಯೋಗಿಕ ಯೋಜನೆಯನ್ನು ಜಾರಿಗೊಳಿಸಲಾಗುವುದು. ನಂತರ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಅಡಿಯಲ್ಲಿ ಬರುವ ಎಲ್ಲಾ ವಿಮಾನ ನಿಲ್ದಾಣಗಳಲ್ಲಿ ಅನುಷ್ಠಾನಗೊಳಿಸಲಾಗುವುದು. ಇದಲ್ಲದೆ, ವಿಮಾನ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಕಿಯೋಸ್ಕ್‌ಗಳನ್ನು ಸ್ಥಾಪಿಸಲಾಗುವುದು ಎಂದು ಸಚಿವರು ಹೇಳಿದರು.

**<><*<><>*><>**

೨೦೧೭ರಲ್ಲಿ ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆಯ ಪ್ರಾರಂಭದಿಂದ ೩.೬೪ ಕೋಟಿ ಫಲಾನುಭವಿಗಳಿಗೆ ೧೮ ಸಾವಿರದ ೮೫೪ ಕೋಟಿ ರೂಪಾಯಿಗಳನ್ನು ವಿತರಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿ ಇಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ, ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆಯಡಿ ಫಲಾನುಭವಿಗಳಿಂದ ಕಾಗದರಹಿತ ನೋಂದಣಿಗೆ ಕ್ರಮ ಕೈಗೊಳ್ಳಲಾಗಿದೆ. ಸುಲಭ ನೋಂದಣಿಗಾಗಿ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರಿಗೆ ಲಭ್ಯವಿರುವ ಸೌಲಭ್ಯಗಳ ಜೊತೆಗೆ ಮೊಬೈಲ್ ಅಪ್ಲಿಕೇಶನ್ ಅನ್ನು ಪ್ರಾರಂಭಿಸಲಾಗಿದೆ ಎಂದು ಹೇಳಿದರು. ಫಲಾನುಭವಿಗಳ

ಬ್ಯಾಂಕ್ ಖಾತೆಗಳಿಗೆ ನೇರವಾಗಿ ಹಣ ವರ್ಗಾವಣೆ ಮಾಡಲಾಗುತ್ತಿದೆ. ಹೆರಿಗೆಗಾಗಿ ಗರ್ಭಿಣಿಯರಿಗೆ ಆರು ಸಾವಿರ ರೂಪಾಯಿಗಳನ್ನು ನೀಡಲಾಗುತ್ತಿದೆ. ಎರಡನೇ ಹೆರಿಗೆಗೆ ಹೆಣ್ಣು ಮಗು ಜನಿಸಿದಲ್ಲಿ, ಆರು ಸಾವಿರ ರೂಪಾಯಿಗಳ ಧನಸಹಾಯವನ್ನು ಸಹ ನೀಡಲಾಗುತ್ತದೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

೨೦೧೪ರಿಂದ ಸರ್ಕಾರದ ನಿರಂತರ ಪ್ರಯತ್ನಗಳ ಪರಿಣಾಮವಾಗಿ ಪಾಕಿಸ್ತಾನದ ಜೈಲುಗಳಿಂದ ೨ ಸಾವಿರದ ೬೩೯ ಭಾರತೀಯ ಮೀನುಗಾರರು ಬಿಡುಗಡೆ ಆಗಿದ್ದಾರೆ ಎಂದು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ತಿಳಿಸಿದ್ದಾರೆ. ಲೋಕಸಭೆಯಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಈ ಮಾಹಿತಿ ನೀಡಿದ ಅವರು, ೨೦೦೮ ರ ಒಪ್ಪಂದದ ಪ್ರಕಾರ, ಪ್ರತಿ ವರ್ಷ ಜನವರಿ ೧ ಮತ್ತು ಜುಲೈ ೧ ರಂದು ಜೈಲಿನಲ್ಲಿರುವ ಉಭಯ ದೇಶಗಳ ನಾಗರಿಕರ ಪಟ್ಟಿಗಳನ್ನು ವಿನಿಮಯ ಮಾಡಿಕೊಳ್ಳಲಾಗುತ್ತದೆ ಎಂದರು. ಈ ವರ್ಷ ಜುಲೈ ೧ ರಂದು ವಿನಿಮಯಗೊಂಡ ಪಟ್ಟಿಗಳ ಪ್ರಕಾರ, ದಮನ್ ಮತ್ತು ದಿಯುವಿನ ೨೪ ಮೀನುಗಾರರು ಸೇರಿದಂತೆ ೨೧೧ ಭಾರತೀಯರ ಬಂಧನವನ್ನು ಪಾಕಿಸ್ತಾನ ಒಪ್ಪಿಕೊಂಡಿದೆ. ಬಂಧಿತರಾಗಿರುವ ಭಾರತೀಯರ ಬಿಡುಗಡೆ ಮತ್ತು ವಾಪಸಾತಿಯನ್ನು ತ್ವರಿತಗೊಳಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವ ಡಾ. ಎಸ್.ಜೈಶಂಕರ್ ಮಾಹಿತಿ ನೀಡಿದರು.

<><*<><>*><>

೨೦೨೫ ರ ವೇಳೆಗೆ ದೇಶದಲ್ಲಿ ಕ್ಷಯರೋಗ ಮುಕ್ತಗೊಳಿಸುವ ಗುರಿಯನ್ನು ನಿಗದಿಪಡಿಸಲಾಗಿದೆ. ರಾಷ್ಟ್ರೀಯ ಕಾರ್ಯತಂತ್ರದ ಯೋಜನೆಯ ಅನುಷ್ಠಾನದೊಂದಿಗೆ ಕ್ಷಯರೋಗ ಪ್ರಕರಣಗಳು ತಗ್ಗಿವೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಹಾಯಕ ಸಚಿವೆ ಅನುಪ್ರಿಯಾ ಪಟೇಲ್ ಹೇಳಿದ್ದಾರೆ. ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಭಾರತದಲ್ಲಿ ಕ್ಷಯರೋಗದ ಪ್ರಮಾಣವು ೨೦೧೫ ರಲ್ಲಿ ಲಕ್ಷ ಜನಸಂಖ್ಯೆಗೆ ೨೩೭ ರಿಂದ ೨೦೨೩ ರಲ್ಲಿ ಪ್ರತಿ ಲಕ್ಷ ಜನಸಂಖ್ಯೆಗೆ ೧೯೫ ಕ್ಕೆ ಇಳಿಕೆಯಾಗಿದೆ. ಈ ಮೂಲಕ ಕ್ಷಯರೋಗ ಪ್ರಮಾಣ ಶೇಖಡ ೧೭.೭ ರಷ್ಟು ತಗ್ಗಿದೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ರಾಜ್ಯಸಭೆ ಸಭಾಪತಿ ಜಗದೀಪ್ ಧನ್‌ಕರ್ ವಿರುದ್ಧದ ಅವಿಶ್ವಾಸ ನಿರ್ಣಯದ ವಿಷಯವಾಗಿ ಆಡಳಿತ ಮತ್ತು ವಿರೋಧ ಪಕ್ಷದ ಸದಸ್ಯರ ನಡುವೆ ತೀವ್ರ ಮಾತಿನ ಚಕಮಕಿ ನಡೆದ ನಂತರ ರಾಜ್ಯಸಭೆಯನ್ನು ದಿನದ ಮಟ್ಟಿಗೆ ಮುಂದೂಡಲಾಗಿದೆ. ಕಾಂಗ್ರೆಸ್ ನೇತೃತ್ವದ ಪ್ರತಿಪಕ್ಷಗಳು, ರಾಜ್ಯಸಭೆ ಸಭಾಪತಿ ಜಗದೀಪ್ ಧನ್‌ಕರ್ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಿವೆ. ರಾಜ್ಯಸಭೆ ಸಭಾಪತಿ ವಿರುದ್ಧ ಕಳೆದ ಮೂವತ್ತು ವರ್ಷಗಳಲ್ಲಿ ಎಷ್ಟು ನೋಟಿಸ್‌ಗಳು ಬಂದಿವೆ ಎಂಬುದನ್ನು ಸದನವು ಮಾಹಿತಿ ನೀಡಬೇಕು ಎಂದು ಜಗದೀಪ್ ಧನ್‌ಕರ್ ಇದೇ ವೇಳೆ ಹೇಳಿದರು.

<><*<><>*><>

ಹೈದರಾಬಾದ್ ಚಿತ್ರಮಂದಿರದ ಬಳಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ತೆಲುಗು ನಟ ಅಲ್ಲು ಅರ್ಜುನ್ ಬಂಧನವಾದ ಕೆಲವೇ ಗಂಟೆಗಳಲ್ಲಿ ತೆಲಂಗಾಣ ಹೈಕೋರ್ಟ್, ಅವರಿಗೆ ೪ ವಾರಗಳ ಮಧ್ಯಂತರ ಜಾಮೀನು ಮಂಜೂರು ಮಾಡಿದೆ. ಹೈದರಾಬಾದ್‌ನ ಸಂಧ್ಯಾ ಚಿತ್ರಮಂದಿರದ ಬಳಿ ಕಾಲ್ತುಳಿತ ಸಂಭವಿಸಿ, ಒಬ್ಬ ಮಹಿಳೆ ಸಾವನ್ನಪ್ಪಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿಕ್ಕಡಪಲ್ಲಿ ಪೊಲೀಸರು ಅವರ ನಿವಾಸಕ್ಕೆ ತೆರಳಿ, ಅವರನ್ನು ಬಂಧಿಸಿದ್ದರು.

<><*<><>*><>

ವಿಶ್ವ ಚೆಸ್ ಚಾಂಪಿಯನ್ ಡಿ.ಗುಕೇಶ್‌ಗೆ ಐದು ಕೋಟಿ ರೂಪಾಯಿಗಳ ಬಹುಮಾನವನ್ನು ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಘೋಷಿಸಿದ್ದಾರೆ. ವಿಶ್ವ ಚೆಸ್ ಚಾಂಪಿಯನ್ ಡಿ.ಗುಕೇಶ್‌ಗೆ ತಮಿಳುನಾಡು ರಾಜ್ಯಪಾಲ ಆರ್.ಎನ್.ರವಿ ಸೇರಿದಂತೆ ದೇಶದ ಅನೇಕ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

<><*<><>*><>

ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್-ಊಂಐ ಜೊತೆ ೧೨, SU-೩೦ಒಎಐ ವಿಮಾನಗಳನ್ನು ಖರೀದಿಸಲು ರಕ್ಷಣಾ ಸಚಿವಾಲಯ ೧೩ ಸಾವಿರದ ೫೦೦ ಕೋಟಿ ರೂಪಾಯಿಗಳ ಒಪ್ಪಂದಕ್ಕೆ ಸಹಿ ಹಾಕಿದೆ. ವಿಮಾನದ ಪೂರೈಕೆಯು ಭಾರತೀಯ ವಾಯುಪಡೆ ಕಾರ್ಯಾಚರಣೆಯ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ ದೇಶದ ರಕ್ಷಣಾ ಸನ್ನದ್ಧತೆಯನ್ನು ಬಲಪಡಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ. ಭಾರತೀಯ ರಕ್ಷಣಾ ಉದ್ಯಮ ತಯಾರಿಸಬೇಕಾದ ಅನೇಕ ಘಟಕಗಳ ಸ್ವದೇಶೀಕರಣದಿಂದ ವಿಮಾನವು ಶೇಕಡ ೬೨.೬ರಷ್ಟು ಸ್ಥಳೀಯ ಉಪಕರಣಗಳನ್ನು ಒಳಗೊಂಡಿರುತ್ತದೆ ಎಂದು ಸಚಿವಾಲಯ ತಿಳಿಸಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**